# ಯಲಹಂಕದಲ್ಲಿ ಸೈಕಲ್ ದಿನ



ಭಾನುವಾರ ಯಲಹಂಕದಲ್ಲಿ ಹಮ್ಮಿಕೊಂಡಿದ್ದ ಸೈಕಲ್ ದಿನಾಚರಣೆಗೆ ವಿಧಾನಸಭಾಧ್ಯಕ್ಷ ಕಾಗೋಡು ತಿಮ್ಮಪ್ಪ ಹಾಗೂ ಶಾಸಕ ಎಸ್. ಆರ್. ವಿಶ್ವನಾಥ್ ಚಾಲನೆ ನೀಡಿದರು.

**ಯಲಹಂಕ:** ನಗರ ಭೂಸಾರಿಗೆ ನಿರ್ದೇಶನಾಲಯ, ಯಲಹಂಕದ ಪರಿಸರ ಸ್ನೇಹಿ ಸಂಸ್ಥೆ ಸಂಯುಕ್ತಾಶ್ರಯದಲ್ಲಿ ಭಾನುವಾರ ಸೈಕಲ್ ದಿನಾಚರಣೆಗೆ ವಿಧಾನಸಭಾಧ್ಯಕ್ಷ ಕಾಗೋಡು ತಿಮ್ಮಪ್ಪ ಹಾಗೂ ಶಾಸಕ ಎಸ್.ಆರ್. ವಿಶ್ವನಾಥ್ ಚಾಲನೆ ನೀಡಿದರು.

ಪರಿಸರ ಸಂರಕ್ಷಣೆ ಉದ್ದೇಶದ ನಿಟ್ಟಿನಲ್ಲಿ ಸೈಕಲ್ ದಿನಾಚರಣೆ ಆಚರಿಸುತ್ತಿರುವುದಕ್ಕೆ ಕಾಗೋಡು ತಿಮ್ಮಪ್ಪ ಮೆಚ್ಚುಗೆ ವ್ಯಕ್ತಪಡಿಸಿದರು. ನಗರಗಳಲ್ಲಿ ವಾಹನದಟ್ಟಣೆ ಹೆಚ್ಚಾಗುತ್ತಿದ್ದು, ಪರಿಸರದ ಮೇಲೂ ಪ್ರತಿಕೂಲ ಪರಿಣಾಮ ಉಂಟಾಗುತ್ತಿದೆ. ಆರೋಗ್ಯ ಹಾಗೂ ಪರಿಸರ ರಕ್ಷಣೆ ದೃಷ್ಟಿಯಿಂದ ಸೈಕಲ್ ಬಳಕೆ ಹೆಚ್ಚಬೇಕು ಎಂದು ಸಲಹೆ ನೀಡಿದರು.

ಎಸ್.ಆರ್. ವಿಶ್ವನಾಥ್ ಮಾತನಾಡಿ ಇಂಧನ ಬಳಕೆ ಕಡಿತ, ಪರಿಸರ ಸಂರಕ್ಷಣೆ ದೃಷ್ಟಿಯಿಂದ ಸೈಕಲ್ ಬಳಕೆ ಅವಶ್ಯ ಎಂದರು. ಡಿಸಿಪಿ ಗಿರೀಶ್, ಬಿಎಂಟಿಸಿ ನಿರ್ದೇಶಕ ಪುಷ್ಕರ್‌ಕುಮಾರ್, ನಗರ ಜಿಪಂ ಮಾಜಿ ಅಧ್ಯಕ್ಷೆ ವಾಣಿಶ್ರೀ ವಿಶ್ವನಾಥ್, ನಗರ ಭೂಸಾರಿಗೆ ನಿರ್ದೇಶನಾಲಯದ ಯೋಜನಾಕಾರ ಸೋನಲ್ ಕುಲಕರ್ಣಿ, ಬಿಬಿಎಂಪಿ ಸದಸ್ಯ ಎಂ. ಮುನಿರಾಜು ಎಜ್ಜಿ ಗ್ರೂಪ್ ವ್ಯವಸ್ಥಾಪಕ ನಿರ್ದೇಶಕ ಹಿಷಾಮ್ ಸೈಯದ್ ತಾಮಿರ್ಝ್ ಉಪಸ್ಥಿತರಿದ್ದರು.

**ಪ್ರಮುಖ ಬೀದಿಗಳಲ್ಲಿ ರ‍್ಯಾಲಿ:** ಯಲಹಂಕದ ಪ್ರಮುಖ ಬಡಾವಣೆಗಳಲ್ಲಿ 5 ಸಾವಿರಕ್ಕೂ ಹೆಚ್ಚು ಮಂದಿ, ಸೈಕಲ್ ಸವಾರಿ ಮೂಲಕ ಜನರಲ್ಲಿ ಜಾಗೃತಿ ಮೂಡಿಸಿದರು. ಲಗೋರಿ, ಚೌಕಾಬಾರ, ಕುಂಟೆಬಿಲ್ಲೆ, ಹಗ್ಗ ಜಗ್ಗಾಟ ಮತ್ತಿತರ ಕ್ರೀಡೆಗಳನ್ನು ಆಯೋಜಿಸಲಾಗಿತ್ತು.